ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018-19 :** **ದಿನಾಂಕ : 04-10-2018**

# ಪತ್ರಿಕಾ ಆಮಂತ್ರಣ

1. ರಾಜ್ಯ ಮಟ್ಟದ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಕುರಿತ ಕಾರ್ಯಾಗಾರ

**ಉದ್ಘಾಟನೆ:**
ಕೃಷ್ಣಬೈರೇಗೌಡ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ದಿನಾಂಕ: 05-10-2018, ಶುಕ್ರವಾರ, ಸಮಯ: ಬೆಳಿಗ್ಗೆ 9.30 ಗಂಟೆಗೆ.
ಸ್ಥಳ: ದಿ ಹೋಟೆಲ್ ಕ್ಯಾಪಿಟಲ್, ರಾಜಭವನ ರಸ್ತೆ, ಬೆಂಗಳೂರು.

2. ರೈತ ವಿಜ್ಞಾನ ಕಾಂಗ್ರೆಸ್:

ಉದ್ಘಾಟನೆ:
ಎನ್.ಹೆಚ್.ಶಿವಶಂಕರ ರೆಡ್ಡಿ, ಕೃಷಿ ಸಚಿವರು.

ಅಧ್ಯಕ್ಷತೆ:
ಡಾ.ಎಂ.ಮಲ್ಲಪ್ಪ, ಅಧ್ಯಕ್ಷರು, ಕೃಷಿ ತಂತ್ರಜ್ಞರ ಸಂಸ್ಥೆ.

ದಿನಾಂಕ: 05-10-2018, ಶುಕ್ರವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ.
ಸ್ಥಳ: ಕೃಷಿ ತಂತ್ರಜ್ಞರ ಸಂಸ್ಥೆ, ನಂ 15, ಕ್ವೀನ್ಸ್ ರಸ್ತೆ, ಬೆಂಗಳೂರು.

3. ಸಾವಯವ ಮತ್ತು ಸಿರಿಧಾನ್ಯಗಳು 2019, ಅಂತರಾಷ್ಟ್ರೀಯ ವಾಣಿಜ್ಯ ಮೇಳ:

**ಅನಾವರಣ:**
ಎನ್.ಹೆಚ್. ಶಿವಶಂಕರ ರೆಡ್ಡಿ, ಕೃಷಿ ಸಚಿವರು.

ದಿನಾಂಕ: 05-10-2018, ಶುಕ್ರವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ.
ಸ್ಥಳ: ಶಾಂಗ್ರಿ-ಲಾ, ನಂ. 56-6-ಬಿ, ಪ್ಯಾಲೇಸ್ ರಸ್ತೆ, ಅಬ್ಲೋಟ್ ಲೇಔಟ್,
ವಸಂತನಗರ, ಬೆಂಗಳೂರು – 560 052.

# ಪತ್ರಿಕಾ ಪ್ರಕಟಣೆ

**ಸಂಖ್ಯೆ:1085/1185**

## ‘ಬೆಳ್ಳಿ ಹೆಜ್ಜೆ’ ಯಲ್ಲಿ ನಮ್ಮೊಂದಿಗೆ ಡಾ. ಬಿ.ಎಲ್. ವೇಣು

ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯ ಈ ತಿಂಗಳ ‘ಬೆಳ್ಳಿ ಹೆಜ್ಜೆ’ ಕಾರ್ಯಕ್ರಮದಲ್ಲಿ ಸಾಹಿತಿ ಡಾ. ಬಿ.ಎಲ್. ವೇಣು ಅವರು ಪಾಲ್ಗೊಳ್ಳಲಿದ್ದಾರೆ.

ಅಕ್ಟೋಬರ್ 6 ರಂದು ಸಂಜೆ 5.00 ಗಂಟೆಗೆ ನಗರದ ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರ ಪಾರ್ಕ್ ರಸ್ತೆ, ಬೆಂಗಳೂರು ಇಲ್ಲಿ ‘ಬೆಳ್ಳಿ ಹೆಜ್ಜೆ’ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ವಾರ್ತಾ ಮತ್ತು ಸಾರ್ವಜನಿಕರ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಎಸ್.ಎ. ಚಿನ್ನೇಗೌಡ, ಹಿರಿಯ ಚಲನಚಿತ್ರ ನಿರ್ದೇಶಕ ಎಸ್.ವಿ. ರಾಜೇಂದ್ರಸಿಂಗ್ ಬಾಬು, ಹಿರಿಯ ಚಲನಚಿತ್ರ ನಟ ದೊಡ್ಡಣ್ಣ ಹಾಗೂ ಹಿರಿಯ ಚಲನಚಿತ್ರ ನಟ ಹಾಗೂ ನಿರ್ಮಾಪಕರಾದ ರಾಕ್‌ಲೈನ್ ವೆಂಕಟೇಶ್ ಅವರು ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಡಾ. ನಾಗತಿಹಳ್ಳಿ ಚಂದ್ರಶೇಖರ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ:1087/1187**

## ಸ್ಥಿರಾಸ್ತಿಗಳ ವ್ಯವಹಾರಗಳಿಗೆ ಸಂಬಂಧಿಸಿದಂತೆ ಕಾವೇರಿ ಆನ್‌ಲೈನ್ ಸೇವೆ

ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ಸ್ಥಿರಾಸ್ತಿಗಳ ವ್ಯವಹಾರಗಳಿಗೆ ಸಂಬಂಧಿಸಿದಂತೆ ಆಸ್ತಿಗಳ ಹಸ್ತಾಂತರ, ಅಡಮಾನ, ಭೋಗ್ಯ ಮತ್ತು ಅಧಿಕಾರ

ಪತ್ರಗಳನ್ನು ನೋಂದಣಿಗೆ ಸಂಬಂಧಿಸಿದಂತಹ ಈ ಸೇವೆಗಳನ್ನು ಸುಲಭವಾಗಿ ತಲುಪಿಸಲ ಇಲಾಖೆಯು ಕಾವೇರಿ ಆನ್‌ಲೈನ್ KAVERI Online ಸೇವೆಗಳನ್ನು ಅಭಿವೃದ್ಧಿಪಡಿಸಿದೆ.

ಕರ್ನಾಟಕ ಸರ್ಕಾರದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ಸ್ಥಿರಾಸ್ತಿಗಳ ವ್ಯವಹಾರಗಳಿಗೆ ಸಂಬಂಧಿಸಿದಂತೆ ಆಸ್ತಿಗಳ ಹಸ್ತಾಂತರ, ಅಡಮಾನ, ಭೋಗ್ಯ ಮತ್ತು ಅಧಿಕಾರ ಪತ್ರಗಳನ್ನು ನೋಂದಣಿ ಮಾಡುವ ಜವಾಬ್ದಾರಿ ಹೊಂದಿರುತ್ತದೆ. ನೋಂದಾಯಿಸಿದ ದಾಖಲೆಗಳ ಭದ್ರತೆಯನ್ನು ಕಾಪಾಡಿಕೊಂಡು ಅವುಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಸಂರಕ್ಷಿಸುವುದು ಇಲಾಖೆಯ ಆದ್ಯ ಕರ್ತವ್ಯವಾಗಿರುತ್ತದೆ.

- **ಸ್ಥಿರಾಸ್ತಿಗಳ ಋಣಭಾರ ಪ್ರಮಾಣ ಪತ್ರ/ನೋಂದಾಯಿತ ದಸ್ತಾವೇಜುಗಳ ದೃಢೀಕೃತ ನಕಲು ಪ್ರತಿ ಪೂರೈಸುವಿಕೆ:**

  ಸ್ಥಿರಾಸ್ತಿಗಳ ಋಣಭಾರ ಪ್ರಮಾಣ ಪತ್ರ ಮತ್ತು ನೋಂದಾಯಿತ ದಸ್ತಾವೇಜುಗಳ ದೃಢೀಕೃತ ನಕಲು ಪ್ರತಿಗಳನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿರುತ್ತದೆ. ಒಂದು ವೇಳೆ ನಿರ್ದಿಷ್ಟ ಆಸ್ತಿಗಳ ಕುರಿತು ಋಣಭಾರಗಳನ್ನು ಪರಿಶೀಲಿಸಬೇಕಾದಲ್ಲಿ ಆಸ್ತಿಯ ವಿವರವನ್ನು ನೀಡಿ ನೈಜ ಸಮಯದಲ್ಲಿ ವಿವರಗಳನ್ನು ಪಡೆಯಬಹುದಾಗಿರುತ್ತದೆ. ಡಿಜಿಟಲ್ ಸಹಿ ಮಾಡಿದ ಋಣಭಾರ ಪ್ರಮಾಣ ಪತ್ರಗಳನ್ನು ಸಾರ್ವಜನಿಕರು ಆನ್‌ಲೈನ್‌ನ ಮೂಲಕ ಸೂಕ್ತ ಶುಲ್ಕವನ್ನು ಪಾವತಿಸುವ ಮೂಲಕ ಪಡೆಯಬಹುದಾಗಿರುತ್ತದೆ.

  ನೋಂದಾಯಿಸಿದ ದಸ್ತಾವೇಜಿನ ದೃಢೀಕೃತ ನಕಲನ್ನು ಪಡೆಯಲು ಸಾರ್ವಜನಿಕರು ಆನ್‌ಲೈನ್‌ನಲ್ಲಿ ದಸ್ತಾವೇಜು ನೋಂದಾಯಿಸಿದ ಉಪನೋಂದಣಿ ಕಚೇರಿಯ ಹೆಸರನ್ನು ಆಯ್ಕೆ ಮಾಡಿ ದಸ್ತಾವೇಜಿನ ಸಂಖ್ಯೆ ನಮೂದಿಸಿ ಸೂಕ್ತ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಿ ಪಡೆಯಬಹುದಾಗಿರುತ್ತದೆ.

- **ಸ್ಥಿರಾಸ್ತಿಗಳ ಮೌಲ್ಯ ಮತ್ತು ಮುದ್ರಾಂಕ ಶುಲ್ಕಗಳ ಲೆಕ್ಕ ಹಾಕುವಿಕೆ:**

  ಸಾರ್ವಜನಿಕರು ತಮ್ಮ ಆಸ್ತಿಯ ವಿವರಗಳನ್ನು ತಂತ್ರಾಂಶದಲ್ಲಿ ನಮೂದಿಸಿ, ಆಸ್ತಿಯ ಮಾರ್ಗಸೂಚಿ ಮೌಲ್ಯವನ್ನು ಸ್ವತ: ಲೆಕ್ಕ ಮಾಡಬಹುದು ಹಾಗೂ ಪಾವತಿಸಬೇಕಾದ ಮುದ್ರಾಂಕ ಶುಲ್ಕವನ್ನು ಸರಳ ಮತ್ತು ಸುಲಭ ಹಂತಗಳಲ್ಲಿ ತಂತ್ರಾಂಶದಲ್ಲಿ ಲೆಕ್ಕ ಮಾಡಬಹುದಾಗಿರುತ್ತದೆ.

- **ಸಾರ್ವಜನಿಕರಿಂದ ನೋಂದಣಿ ಪೂರ್ವ ಡೇಟಾ ಎಂಟ್ರಿ:**

  ಈ ಸೇವೆಯು ಸಾರ್ವಜನಿಕರಿಂದ ಉಪನೋಂದಣಿ ಕಚೇರಿಗೆ ಅನೇಕ ಬಾರಿ ಭೇಟಿ ನೀಡುವುದನ್ನು ತಪ್ಪಿಸಿ ಆನ್‌ಲೈನ್ ಮೂಲಕ ದಸ್ತಾವೇಜನ್ನು ನೋಂದಣಿಗೆ ಸಲ್ಲಿಸುವ ಅವಕಾಶ ಕ್ಲಪಿಸುತ್ತದೆ. ಸಾರ್ವಜನಿಕರು ನೋಂದಾಯಿಸಬೇಕಾದ ಆಸ್ತಿಯ ಎಲ್ಲಾ ವಿವರಗಳನ್ನು ನೋಂದಣಿ ಪೂರ್ವದಲ್ಲಿ ಆನ್‌ಲೈನ್ ಮೂಲಕ ನಮೂದಿಸಿಕೊಂಡು, ಮಾಹಿತಿಗಳನ್ನು ವೀಕ್ಷಿಸಿದ ನಂತರ ಅವಶ್ಯವಿದ್ದಲ್ಲಿ ಸರಿಪಡಿಸಿ ಸಂಬಂಧಪಟ್ಟ ದಾಖಲೆಗಳನ್ನು ಅಪ್‌ಲೋಡ್ ಮಾಡಿ

ಆನ್‌ಲೈನ್‌ನಲ್ಲಿ ನೋಂದಣಿಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ನಿಗದಿಪಡಿಸಿದ ಆಸ್ತಿಯ ಮಾರ್ಗಸೂಚಿ ದರಗಳನ್ನು ತಂತ್ರಾಂಶದಲ್ಲಿ ಪಡೆದು, ದಸ್ತಾವೇಜಿಗೆ ಸಂಬಂಧಿಸಿದ ಆಸ್ತಿಯ ಮಾರುಕಟ್ಟೆ ಮೌಲ್ಯವನ್ನು ನಿರ್ಧರಿಸಿಕೊಳ್ಳಬಹುದು. ನಂತರ ನಿರ್ಧರಿಸಿದ ಮಾರುಕಟ್ಟೆ ಮೌಲ್ಯದ ಮಂಜೂರಾತಿಗಾಗಿ ಅರ್ಜಿಯನ್ನು ಉಪನೋಂದಣಾಧಿಕಾರಿಗಳಿಗೆ ಸಲ್ಲಿಸಬಹುದು.

- **<u>ದಸ್ತಾ ವೇಜಿನ ನೋಂದಣಿಗೆ ಮುಂಗಡ ಕಾಲ ನಿಗದಿಪಡಿಸುವಿಕೆ (Appointment Booking )</u>** : ಉಪನೋಂದಣಾಧಿಕಾರಿಗಳು ಸಾರ್ವಜನಿಕರಿಮದ ಆನ್‌ಲೈನ್ ಮೂಲಕ ಅರ್ಜಿ ಮತ್ತು ಮೌಲ್ಯವನ್ನು ಮಾನ್ಯಗೊಳಿಸಿದ ನಂತರ ದಸ್ತಾವೇಜಿಗೆ ತಗಲುವ ಶುಲ್ಕಗಳನ್ನು ಸಾರ್ವಜನಿಕರು ಪಾವತಿಸಲು ಸಿದ್ಧರಿದ್ದಲ್ಲಿ ಆನ್‌ಲೈನ್ ಮೂಲಕ ಪಾವತಿಸಿ, ಅವಕಾಶವಿದ್ದ ಮುಂದಿನ ದಿನಾಂಕಗಳಂದು ನೋಂದಣಿ ಪ್ರಕ್ರಿಯೆಗಾಗಿ ಮುಂಗಡವಾಗಿ ಕಾಲ ನಿಗದಿಪಡಿಸಿಕೊಳ್ಳಬಹುದಾಗಿರುತ್ತದೆ.

- **<u>ಉಪನೋಂದಣಿ ಕಚೇರಿಯ ಗುರುತಿಸುವಿಕೆ:</u>**

ರಾಜ್ಯದ ಎಲ್ಲಾ 250 ಉಪನೋಂದಣಿ ಕಚೇರಿಗಳ ವಿಳಾಸದ ಮಾಹಿತಿಯು ಆನ್‌ಲೈನ್ ಪೋರ್ಟಲ್‌ನಲ್ಲಿ ಲಭ್ಯವಿದ್ದು, ಸಂಬಂಧಿಸಿದ ಕಾರ್ಯ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ವಿವರವನ್ನು ಸಾರ್ವಜನಿಕರು ತಂತ್ರಾಂಶದಲ್ಲಿ ಪಡೆದುಕೊಳ್ಳಬಹುದಾಗಿರುತ್ತದೆ.

- **<u>ವಿವಾಹ ನೋಂದಣಿ ಕಚೇರಿಯ ಗುರುತಿಸುವಿಕೆ:</u>**

ವಧು ಮತ್ತು ವರನ ವಿಳಾಸ ಹಾಗೂ ವಿವಾಹನೆರವೇರಿದ ಸ್ಥಳ ಆಧಾರಿಸಿ ವಿವಾಹವನ್ನು ನೋಂದಾಸಿಕೊಳ್ಳಬೇಕಾದ ಕಚೇರಿ ವಿವರಗಳನ್ನು ದೃಢಪಡಿಸಿಕೊಳ್ಳಬಹುದು. ವಿವಾಹ ನೋಂದಣಿ ಮಾಡಿಕೊಳ್ಳಲು ಆಯಾ ಕಾರ್ಯ ವ್ಯಾಪ್ತಿಯ ಕಚೇರಿಗಳ ವಿವರವನ್ನು ಆನ್‌ಲೈನ್ ಪೋರ್ಟಲ್‌ನಿಂದ ಪಡೆಯಬಹುದಾಗಿರುತ್ತದೆ.

- KACOMP ಕಾಯ್ದೆ ಅಡಿಯಲ್ಲಿ ಕೃಷಿ ಸಾಲಗಳಿಗೆ ಸಂಬಂಧಿಸಿದ ಡಿಕ್ಲರೇಷನ್ ಮತ್ತು ಸಾಲ ತೀರುವಳಿ ಪತ್ರಗಳ ಫೈಲಿಂಗ್ ಮಾಡುವಿಕೆ:

ರೈತರಿಗೆ ಕೃಷಿ ಸಾಲನೀಡುವ ಸಂದರ್ಭದಲ್ಲಿ KACOMP ಕಾಯ್ದೆ ಅಡಿಯಲ್ಲಿ ಪಡೆಯುವ ಡಿಕ್ಲರೇಷನ್ ಮತ್ತು ಸಾಲ ತೀರುವಳಿ ಪತ್ರಗಳನ್ನು ಆನ್‌ಲೈನ್ ಮೂಲಕ ಫೈಲಿಂಗ್ ಮಾಡುವ ಸೌಲಭ್ಯವನ್ನು ಬ್ಯಾಂಕುಗಳ ಮತ್ತು ಇತರೆ ಹಣಕಾಸು ಸಂಸ್ಥೆಗಳಿಗೆ ಒದಗಿಸಲಾಗಿದೆ.

- **<u>ಮೌಲ್ಯ ಮೊಬೈಲ್ ಆಫ್</u>**

ಸಾರ್ವಜನಿಕರು ಯಾವುದೇ ಸ್ಥಿರಾಸ್ತಿಯ ಮಾರ್ಗಸೂಚಿ ಮೌಲ್ಯ ತಿಳಿಯಲು ಅನುಕೂಲವಾಗುವಂತೆ, ಮೌಲ್ಯ ಎಂಬ ಹೆಸರಿನ ಮೊಬೈಲ್ ಆಪ್ ಅನ್ನು ಅಭಿವೃದ್ಧಿಪಡಿಸಲಾಗಿದೆ.

- **ಆನ್ ಲೈನ್ ಇ-ಸ್ಟಾಂಪ್ ಮುದ್ರಾಂಕ ಕಾಗದ:**

ಸಾರ್ವಜನಿಕರು ತಾವು ಮಾಡಿಕೊಳ್ಳುವ ಕರಾರು ಪತ್ರ ಮತ್ತು ಪ್ರಮಾಣ ಪತ್ರಗಳಿಗೆ ಮುದ್ರಾಂಕ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಿ, ಇ-ಸ್ಟಾಂಪ್ ಕಾಗದವನ್ನು ತಮ್ಮ ಮನೆಯಿಂದಲೇ ಪ್ರಿಂಟ್ ಓಟ್ ತೆಗೆದುಕೊಳ್ಳುವ ಸೌಲಭ್ಯವನ್ನು ಸ್ಟಾಕ್ ಹೋಲ್ಡಿಂಗ್ ಕಾರ್ಪೋರೇಷನ್ ಲಿ. (SHCIL) ರವರ ಸಹಯೋಗದೊಂದಿಗೆ ಕಲ್ಪಿಸಲಾಗಿದೆ.

**ಸಂಖ್ಯೆ:1088/1188**

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)

ಆನೇಕಲ್ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಗೌರವಧನ ಆಧಾರದ ಹುದ್ದೆಗಳನ್ನು ಭರ್ತಿಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ದಿನಾಂಕ: 25-09-2018 ರಿಂದ ದಿನಾಂಕ: 25-10-2018 ರ ತನಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ತಾಲ್ಲೂಕು ಶಿಶು ಅಭಿವೃದ್ಧಿ ಯೋನಾಧಿಕಾರಿಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಲು ಅಥವಾ www.anganwadirecruit.kar.nic.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1089/1189**

## ರೈತರ ಅನುಕೂಲಕ್ಕಾಗಿ ಬೆಳೆ ಸಮೀಕ್ಷೆ ಕಾರ್ಯಕ್ಕೆ ಒತ್ತು

ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರವು 2018 ರ ಮುಂಗಾರು ಋತುವಿನಲ್ಲಿ ಖಾಸಗಿ ನಿವಾಸಿಗಳನ್ನು ಬಳಸಿ ಬೆಳೆ ಸಮೀಕ್ಷೆ ಯೋಜನೆಯನ್ನು ಹಮ್ಮಿಕೊಂಡಿದ್ದು ಸಧ್ಯದಲ್ಲಿಯೇ ಈ ಖಾಸಗಿ ನಿವಾಸಿಗಳು ಕ್ಷೇತ್ರಮಟ್ಟದಲ್ಲಿ ಬೆಳೆ ವಿವರಗಳನ್ನು ಮೊಬೈಲ್ ಆಪ್ ಮೂಲಕ ಸಂಗ್ರಹಿಸುವ ಕಾರ್ಯವನ್ನು ಪ್ರಾರಂಭಿಸಲಿದ್ದಾರೆ.

ರೈತರು ಬೆಳೆದಿರುವ ಮಾಹಿತಿಯನ್ನು ಸರ್ಕಾರಿ ದಾಖಲೆಗಳಲ್ಲಿ ನಿಖರವಾಗಿ ದಾಖಲಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದ್ದು ಸದರಿ ಮಾಹಿತಿಯನ್ನು ಹಲವು ರೈತ ಫಲಾನುಭವಿ ಯೋಜನೆಗಳಲ್ಲಿ ಉಪಯೋಗಿಸಲಾಗುವುದು. ಇದರಿಂದ ನೈಜ ರೈತರಿಗೆ ಅನುಕೂಲವಾಗಲಿದೆ.

ಬೆಳೆ ಸಮೀಕ್ಷೆ ಯೋಜನೆಯು ಯಶಸ್ವಿಯಾಗಿ ಅನುಷ್ಠಾನಗೊಳ್ಳಬೇಕಾದರೆ ರೈತರು ಈ ಯೋಜನೆಯಲ್ಲಿ ಪಾಲ್ಗೊಂಡು ತಮ್ಮ ಕ್ಷೇತ್ರದ ಬೆಳೆಯ ವಿವರಗಳನ್ನು ದಾಖಲಿಸಲು ಸಹಾಯ ಮಾಡಬೇಕು ಹಾಗೂ ಸಮೀಕ್ಷಾ ಸಮಯದಲ್ಲಿ ರೈತರು ತಮ್ಮ ಮೊಬೈಲ್ ಸಂಖ್ಯೆ ನೀಡುವ ಮುಖಾಂತರ ಸರ್ಕಾರದ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ವಂದಿತಾ ಶರ್ಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಈ ಬೆಳೆ ಸಮೀಕ್ಷೆಯ ಅನುಕೂಲಗಳು:**

1. ಖಚಿತವಾಗಿ ಯಾವ ಬೆಳೆ ಎಷ್ಟು ವಿಸ್ತೀರ್ಣದಲ್ಲಿ ಬೆಳೆದಿದೆ ಎಂಬುದನ್ನು ತಿಳಿಯಬಹುದಾಗಿದೆ.
2. ಯಾವುದೆ ಪ್ರದೇಶದಲ್ಲಿ ಪ್ರಕೃತಿ ವಿಕೋಪದಿಂದ ನಷ್ಟವಾದಲ್ಲಿ ಯಾವ ಪ್ರದೇಶದಲ್ಲಿ ಯಾವ ಬೆಳೆ ಎಷ್ಟು ನಷ್ಟ ಎಂದು ಅಂದಾಜಿಸಬಹುದು.
3. ರಾಜ್ಯದಲ್ಲಿ ಯಾವ ಬೆಳೆಯ ಉತ್ಪಾದನೆ ಎಷ್ಟಿದೆ?
   ಯಾವ ಬೆಳೆಯ ಉತ್ಪಾದನೆ ಕಡಿಮೆ ಇದೆ. ಉತ್ಪಾದನೆ ಕಡಿಮೆಯಾದ್ದರಿಂದ ಬೆಲೆಯಲ್ಲಿ ಏರುಪೇರಾಗಲಿದೆಯೇ? ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಳ್ಳಬಹುದು ಎಂದು ಅಂದಜಿಸಬಹುದು ಹಾಗೂ ಯಾವ ಬೆಳೆಗಳಿಗೆ ಬೆಂಬಲಿತ ಬೆಲೆ ನೀಡಬೇಕು ಎಂಬ ನಿರ್ಧಾರ ಕೈಗೊಳ್ಳಬಹುದು.

3. ಬೆಳೆ ವಿಮೆಯಲ್ಲಿ ವಿಮಾ ಘಟಕದ ಖಚಿತವಾದ ವಿಸ್ತೀರ್ಣ ಲಭ್ಯವಾಗಲಿದೆ.
4. ಸರ್ಕಾರದಿಂದ ನೀಡುವ ಸೌಲಭ್ಯಗಳಿಗೆ ಉಪಯೋಗ.
5. ಯಾವ ಬೆಳೆಗಳು ನಶಿಸುತ್ತಿವೆ? ಯಾವ ಬೆಳೆಗಳು ಹೊಸದಾಗಿ ಬೆಳೆಯಲಾಗುತ್ತಿದೆ.

ರೈತರಿಗೆ ಈ ಕೆಳಗಿನ ಅನುಕೂಗಳಾಗಲಿವೆ:

1. ಪಹಣಿಯಲ್ಲಿ ಅವರ ಸರ್ವೆ ನಂಬರಿನಲ್ಲಿ ಯಾವ ಬೆಳೆ ಬೆಳೆದಿದೆಯೋ ಆ ಬೆಳೆಯ ಹೆಸರು ಮತ್ತು ವಿಸ್ತೀರ್ಣ ಸರಿಯಾಗಿ ದಾಖಲಾಗಲಿದೆ.
2. ಪ್ರತಿ ಸರ್ವೆ ನಂಬರಿನಲ್ಲಿ ಬೆಳೆಯ ವಿಸ್ತೀರ್ಣ ಲಭ್ಯವಿರುವುದರಿಂದ ಸರ್ಕಾರದಿಂದ ಸೌಲಭ್ಯ ಪಡೆಯಲು ನೇರವಾಗಿ ಉಪಯೋಗಿಸುವುದರಿಂದ ರೈತರು ಪುನ: ಪಹಣಿಯಲ್ಲಿ ದಾಖಲಿಸುವ ಬಗ್ಗೆ ಕ್ರಮವಹಜಿಸುವ ಅಗತ್ಯವಿರುವುದಿಲ್ಲ.

3. ಬೆಳೆ ವಿಮೆಯಲ್ಲಿ ಆ ಬೆರಳೆಯ ಸಮರ್ಪಕ ವಿಸ್ತೀರ್ಣ ಸಿಗುವುದರಿಮದ ರೈತರಿಗೆ ವಿಮಾ ಪರಿಹಾರದಲ್ಲಿ ಕಡಿತ () ಇರುವುದಿಲ್ಲ. ಬೆಳೆಯು ನಷ್ಟವಾದಲ್ಲಿ ಅವರು ಬೆಳೆ ಬೆಳೆದ ವಿಸ್ತೀರ್ಣಕ್ಕೆ ಸರಿಯುಆಗಿ ವಿಮೆ ಸಿಗುತ್ತದೆ.
4. ಬೆಳೆಯ ವಿಸ್ತೀರ್ಣ ತಿಳಿಯುವುದರಿಂದ ಉತ್ಪಾದನೆ ಬಗ್ಗೆ ಕೂಡಾ ತಿಳಿಯಬಹುದಾಗಿದ್ದು, ಬೆಲೆ ಏರಿಕೆ/ಇಳಿಕೆ ಬಗ್ಗೆ ತಿಳಿದು ನಿರ್ಧರಿಸಿ ರೈತರಿಗೆ ಸಮರ್ಪಕವಾಗಿ ವಿತರಣೆಯನ್ನು ಮಾಡಬಹುದು.

ಈ ಎಲ್ಲಾ ಕಾರಣಗಳಿಂದ ಸರ್ಕಾರ ಸನ್ಮಾನ್ಯ ರೈತರಲ್ಲಿ ವಿನಂತಿಸುವುದೇನೆಂದರೆ:

- ನಿಮ್ಮಲ್ಲಿ ಬೆಳೆ ಸಮೀಕ್ಷೆಯನ್ನು ನಿಮ್ಮ ಹಳ್ಳಿಯಲ್ಲೇ ವಾಸಿಸುವ ಪಿಯುಸಿ ಅಥವಾ ಹೆಚ್ಚಿನ ವಿದ್ಯಾರ್ಹತೆಯುಳ್ಳ ಯುವ ಖಾಸಗಿ ನಿವಾಸಿಗಳು ಅಥವಾ ಸರ್ಕಾರಿ ಸಿಬ್ಬಂದಿಗಳಿಂದ ಕೈಗೊಳ್ಳಲಾಗುತ್ತಿದೆ.
- ಸನ್ಮಾನ್ಯ ರೈತರೇ, ಬೆಳೆ ಸಮೀಕ್ಷೆದಾರರಾದ ಖಾಸಗಿ ನಿವಾಸಿ/ಸರ್ಕಾರಿ ಸಿಬ್ಬಂದಿಗಳಿಗೆ ದಯವಿಟ್ಟು ಸಹಕರಿಸಿರಿ.
- ತಾವು ತಮ್ಮ ಹಳ್ಳಿಯಲ್ಲಿ ಬೆಳೆ ಸಮೀಕ್ಷೆಯನ್ನು ಕೈಗೊಳ್ಳುತ್ತಿರುವ ಸಮೀಕ್ಷೆದಾರರಿಗೆ ಸಹಕಾರ ನೀಡುವುದರೆ ಮೂಲಕ ಸರ್ಕಾರದ ಉದ್ದೇಶ ಸಫಲವಾಗಲು ತಾವು ಕಾರಣೀಭೂತರಾಬೇಕೆಂದು ಕೋರುತ್ತೇನೆ.

1. ನಿಮ್ಮ ಜಮೀನಿಗೆ ಬರುವ ಪೂರ್ವದಲ್ಲಿ ತಮಗೆ ತಿಳಿಸುತ್ತಾರೆ. ತಾವು ಅವರ ಜೊತೆಯಲ್ಲಿದ್ದು ನಿಮ್ಮ ಸರ್ವೆ ನಂಬರನ್ನು ಗುರುತಿಸುವಲ್ಲಿ ಮತ್ತು ಸರ್ವೆ ನಂಬರಿನಲ್ಲಿನ ಬೆಳೆಯ ವಿವರಗಳನ್ನು ಸರಿಯಾಗಿ ದಾಖಲಿಸುವಲ್ಲಿ ಸಹಕರಿಸಿರಿ.
2. ಸಮೀಕ್ಷೆದಾರರು ನಿಮ್ಮ ಸರ್ವೆ ನಂಬರಿನ ಫೋಟೋ ತೆಗೆದುಕೊಳ್ಳುವಾಗ ಕನಿಷ್ಟ ಒಂದು ಫೋಟೋದಲ್ಲಿಯಾದರೂ ತಾವು ಕೂಡಾ ಇರಬೇಕೆಂದು ಕೋರಿದೆ.
3. ಬೆಳೆ ಸಮೀಕ್ಷೆದಾರರಿಗೆ ನಿಮ್ಮ ಮೊಬೈಲ್ ಸಂಖ್ಯೆ ನೀಡಿರಿ.
4. ಇತರೆ ರೈತರು ಬಂಧಿಲ್ಲವಾದಲ್ಲಿ ಅವರ ಸರ್ವೆ ನಂಬರನ್ನು ಗುರುತಿಸುವಲ್ಲಿ ಸಹಕರಿಸಿ ಮತ್ತು ಅಂತಹ ಮೊಬೈಲ್ ಸಂಖ್ಯೆಯನ್ನು ಸಮೀಕ್ಷೆದಾರರಿಗೆ ನೀಡಿರಿ.

ನೆನಪಿಡಿ: ಈ ಬೆಳೆ ಸಮೀಕ್ಷೆಯು ಬೆಳೆಗಳ ಮಾಹಿತಿಯನ್ನು ಸರ್ಕಾರಿ ದಾಖಲೆಗಳಲ್ಲಿ ದಾಖಲಿಸುವ ಹಾಗೂ ಇದನ್ನು ವಿವಿಧ ರೈ ಫಲಾನುಭವಿ ಯೋಜನೆಗಳಲ್ಲಿ ಬಳಸುವ ಉದ್ದೇಶದಿಮದ ಕೈಗೆತ್ತಿಕೊಳ್ಳಲಾಗಿದೆ. ಭೂ ದಾಖಲಾತಿ ಸಂಬಂಧಿತ ಇತರೆ ಎಲ್ಲಾ ವಿಷಯಗಳಿಗಾಗಿ ಹಿಂದಿನ ಕಾರ್ಯವಿಧಾನಗಳು ಮುಂದುವರೆಯಲಿದೆ.

## ಪ್ರಥಮ ಮತ್ತು ದ್ವಿತೀಯ ಡಿ.ಇಎಲ್.ಇಡಿ/ಡಿ.ಇಡಿ ಪೂರಕ ಪರೀಕ್ಷೆ

**ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)**

**ಪ್ರಥಮ ಮತ್ತು ದ್ವಿತೀಯ ಡಿ.ಇಎಲ್.ಇಡಿ/ಡಿ.ಇಡಿ ಅನುತ್ತೀರ್ಣ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಯನ್ನು ಡಿಸೆಂಬರ್–2018ರ ಮಾಹೆಯಲ್ಲಿ ದಿನಾಂಕ:10.12.2018 ರಿಂದ ದಿನಾಂಕ:15.12.2018 ರವರೆಗೆ ನಡೆಸಲು ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ. ಪರೀಕ್ಷಾ ಶುಲ್ಕವನ್ನು ಆಯಾ ಡಿ.ಇಡಿ ಕಾಲೇಜುಗಳ ಮುಖಾಂತರ ಪಾವತಿಸಲು ದಿನಾಂಕ:15.10.2018 ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ www.kseeb.kar.nic.in ನಿಂದ ಪಡೆಯಬಹುದಾಗಿದೆಯೆಂದು ನಿರ್ದೇಶಕರು (ಇತರೆ ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಎಸಿಬಿ ದಾಳಿ

**ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)**

ವಿಜಯಪುರ ಜಿಲ್ಲೆ, ಬಬಲೇಶ್ವರ ತಾಲ್ಲೂಕು, ಸಾರವಾಡ ಗ್ರಾಮದ ನಿವಾಸಿಯು ತಮ್ಮ ಜಮೀನನ್ನು ವಾಟ್ನಿ ಮಾಡಿಕೊಡಲು ಅರ್ಜಿ ಸಲ್ಲಿಸಿರುತ್ತಾರೆ. ಶ್ರೀ. ಚೆನ್ನವೀರಯ್ಯ ಹಿರೇಮಠ, ಗ್ರಾಮಲೆಕ್ಕಾಧಿಕಾರಿ, ಸಾರವಾಡ ಗ್ರಾಮ ರವರು ಅರ್ಜಿದಾರರ ಜಮೀನಿನ ವಾಟ್ನಿ ಮಾಡಿಕೊಡಲು ರೂ.5,000/–ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ: 04.10.2018 ರಂದು ಶ್ರೀ. ಚೆನ್ನವೀರಯ್ಯ ಹಿರೇಮಠ ರವರು ಫಿರ್ಯಾದಿದಾರರಿಂದ ರೂ.5000/– ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

## ACB Raid

Bengaluru, October 4 (Karnataka Information)

A resident of Sarawad Village in Vijayapura District had sought for transfer of Agriculture Land to his name. Sri. Channaveeraya Hiremath, Village Accounant, Sarawada village had demanded bribe amount of Rs.5,000/- to do the same.

On 04.10.2018, the officials of ACB Vijayapura PS have trapped and arrested Sri.Channaveeraya Hiremath while accepting bribe amount Rs.5,000/- from the complainant. The bribe amount has been seized. The Investigation continues says official press release.

**ಡಿಟೆಕ್ಟೀವ್ ಸಬ್ ಇನ್ಸ್‌ಪೆಕ್ಟರ್ (ಸಿಐಡಿ) ಹುದ್ದೆಗಳ ನೇಮಕಾತಿ**

**ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)**

ಡಿಟೆಕ್ಟೀವ್ ಸಬ್ ಇನ್ಸ್‌ಪೆಕ್ಟರ್ (ಸಿಐಡಿ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 7–10–2018 ರಂದು ಬೆಂಗಳೂರು ನಗರದ 02 ಪರೀಕ್ಷಾ ಕೇಂದ್ರದಲ್ಲಿ, ಒಟ್ಟು 1200 ಅಭ್ಯರ್ಥಿಗಳಿಗೆ ಮಧ್ಯಾಹ್ನ 02–00 ಗಂಟೆಯಿಂದ 3–30 ರವರೆಗೆ ಹಾಗೂ ಮಧ್ಯಾಹ್ನ 4–00 ಗಂಟೆಯಿಂದ 5–30 ರವರೆಗೆ ಲಿಖಿತ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಈಗಾಗಲೇ ಅಭ್ಯರ್ಥಿಗಳಿಗೆ ಮಾಹಿತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಸರಿಯಾದ ಸಮಯಕ್ಕೆ ಸೂಚಿಸಿದ ಪರೀಕ್ಷಾ ಕೇಂದ್ರಗಳಿಗೆ ಹಾಜರಾಗಲು ಪೊಲೀಸ್ ಮಹಾ ನಿರ್ದೇಶಕರು ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಲ ಮನ್ನಾ ಕ್ಲೇಮು ಅರ್ಜಿ ಮಾಹಿತಿ ಸರಳ

**–ಸಚಿವ ಬಂಡೆಪ್ಪ ಖಾಶೆಂಪೂರ**

**ಬೆಂಗಳೂರು, ಅಕ್ಟೋಬರ್ 4, 2018 (ಕರ್ನಾಟಕ ವಾರ್ತೆ)**

ಸಹಕಾರ ಸಂಘಗಳ ಸಾಲ ಮನ್ನಾ ಮೊತ್ತ ಕ್ಲೇಮು ಮಾಡಲು ಅರ್ಜಿಯಲ್ಲಿ ಕೇಳಿರುವ ಮಾಹಿತಿ ಸರಳವಾಗಿದ್ದು ರೈತರು ಆತಂಕ ಪಡಬೇಕಾಗಿಲ್ಲ. ಆದಾಯ ತೆರಿಗೆ ಪ್ಯಾನ್ ಕಾರ್ಡ್ ಲಭ್ಯವಿದ್ದಲ್ಲಿ ಮಾತ್ರ ನೀಡಬಹುದು. ಇದು ಐಚ್ಛಿಕ (ಆಪ್ಷನಲ್) ಆಗಿದ್ದು ಯಾವ ರೈತರು ಆತಂಕಪಡುವ ಅವಶ್ಯಕತೆ ಇಲ್ಲ ಎಂದು ಸಹಕಾರ ಸಚಿವ ಬಂಡೆಪ್ಪ ಖಾಶೆಂಪೂರ ಅವರು ತಿಳಿಸಿದ್ದಾರೆ.

ಸಹಕಾರ ಸಂಘಗಳ ಸಾಲ ಮನ್ನಾ ಮೊತ್ತ ಕ್ಲೇಮು ಮಾಡಲು ಈಗಾಗಲೇ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಸರಳವಾದ ಮಾರ್ಗಸೂಚಿಗಳನ್ನು ಸಹಕಾರ ಸಂಘಗಳ ನಿಬಂಧಕರು ಹೊರಡಿಸಿದ್ದಾರೆ.

ರಾಜ್ಯದ ರೈತರು ಸಹಕಾರ ಸಂಘ/ಬ್ಯಾಂಕುಗಳಿಂದ ಪಡೆದ ಬೆಳೆ ಸಾಲವನ್ನು ಮನ್ನಾ ಮಾಡುವುದಾಗಿ ಸರ್ಕಾರದ ಬಜೆಟ್‌ನಲ್ಲಿ ಘೋಷಣೆ ಮಾಡಿದಂತೆ ಸಾಲ ಮನ್ನಾ ಆದೇಶವನ್ನು ಹೊರಡಿಸಲಾಗಿದೆ.

ಅರ್ಜಿ ಸಲ್ಲಿಕೆ ಬಹಳ ಸರಳವಾಗಿದೆ. ಸಾಲ ಪಡೆದ ರೈತರಿಗೆ ಸಾಲ ಮನ್ನಾ ಸೌಲಭ್ಯ ಸಿಗಬೇಕು ಎನ್ನುವ ಕಾರಣಕ್ಕೆ ಅವರ ಉಳಿತಾಯ ಖಾತೆಗೆ ಸಾಲ ಮನ್ನಾ ಮೊತ್ತವನ್ನು ಜಮಾ ನೀಡಿ, ಡಿ.ಸಿ.ಸಿ. ಬ್ಯಾಂಕುಗಳು ಈ ಮೊತ್ತವನ್ನು ಸಂಘ/ಬ್ಯಾಂಕಿನಲ್ಲಿನ ರೈತರ ಸಾಲದ ಖಾತಗೆ ತಕ್ಷಣ ವರ್ಗಾಯಿಸಲಾಗುತ್ತದೆ.

ರೈತ ಕುಟುಂಬದ ಮುಖ್ಯಸ್ಥ ಸಲ್ಲಿಸಬೇಕಾದ ಅರ್ಜಿ ಮತ್ತು ಮುದ್ರೆಯಿಲ್ಲದ ಅಫಿಡವಿಟ್ ನಮೂನೆ ಬಗ್ಗೆ ವಿವರಣೆಯನ್ನು ಸಹ ನೀಡಲಾಗಿದೆ. ಸಾಲ ಪಡೆದ ರೈತರು ಸಾಲ ಮನ್ನಾಕ್ಕಾಗಿ ಅರ್ಜಿ ಯಾವ ರೀತಿ ಸಲ್ಲಿಸಬೇಕು ಎನ್ನುವ ವಿವರಗಳನ್ನು ನಮೂದಿಸಿರುವ ಮಾದರಿ ಅರ್ಜಿಯನ್ನು ಬಿಡುಗಡೆ ಮಾಡಿದ್ದಾರೆ.